ರಾಯಚೂರಿನಲ್ಲಿರುವ ಕೃಷಿ ವಿಶ್ವವಿದ್ಯಾಲಯದ ಬಗ್ಗೆ

ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):-

10 (89) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಯಚೂರಿನಲ್ಲಿರುವ ಕೃಷಿ ವಿಶ್ವವಿದ್ಯಾಲಯದ (ಹೈದ್ರಾಬಾದ್ -ಕರ್ನಾಟಕ) ಪ್ರದೇಶದ ವ್ಯಾಪ್ತಿಯಲ್ಲಿ ಬರುವ ಕೃಷಿ ವಿಜ್ಞಾನ ಕೇಂದ್ರಗಳಲ್ಲಿ ಹಾಗೂ ಕೃಷಿ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ-ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಲು ಬಂದಿರುವ ಪ್ರಸ್ತಾವನೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಯಚೂರಿನಲ್ಲಿರುವ ಕೃಷಿ ವಿಶ್ವವಿದ್ಯಾಲಯದ ಆವರಣದಲ್ಲಿ ಸೋಲಾರ್ ವಿದ್ಯುತ್ ಉತ್ಪಾದನಾ ಘಟಕಗಳ ಸ್ಥಾಪನೆಗಾಗಿ ಬಂದಿರುವ ಪ್ರಸ್ತಾವನೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ಕೃಷಿ ವಿಶ್ವವಿದ್ಯಾಲಯದಲ್ಲಿ ಸಂಶೋಧನೆ ನಡೆಸಲು ಬೇಕಾಗಿರುವ ಅನುದಾನ ಮಂಜೂರಾತಿ ನೀಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?